**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ **2014-15ನೇ** ಸಾಲಿಗೆ ಸಂಬಂಧಿಸಿದಂತೆ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಬೆಳಗಾವಿ ಜಿಲ್ಲೆಗೆ ವರ್ಗಾವಣೆ ಮಾಡುವ ಕುರಿತು.

ಓದಲಾಗಿದೆ : 1) ಮುಕಾನಿಅ, ಜಿಲ್ಲಾ ಪಂಚಾಯತ್ ಶಿವಮೊಗ್ಗ ರವರ ಪತ್ರ ಸಂಖ್ಯೆ ಜಿಪಂಶಿ/ಅಭಿ(7)ರಾಜೈಅಯೋ/ಸ.ಧನ/ಕೇ.ರಾ.ಮಂ/14-15/15-16 ದಿನಾಂಕ **12.08.2015.**

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿರವರ ಅರೆ ಸರ್ಕಾರಿ ಪತ್ರ ಸಂ: ಜಿಪಂ:ಅವಿ:ರಾಜೈಅಯೋ:ವಿವ:2015-16 ದಿನಾಂಕ:17/07/2015

-:0:-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇಲಿನ (1)ರಲ್ಲಿ ಓದಲಾದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರು ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನ **ರೂ. 266.65** ಲಕ್ಷಗಳನ್ನು ಸರ್ಕಾರಕ್ಕೆ ಕಟ್ಟಲು ಸೂಕ್ತ ನಿರ್ದೇಶನ ನೀಡುವಂತೆ ಕೋರಿರುವುದನ್ನು ಪರಿಶೀಲಿಸಿದೆ. ಕಾರ್ಯಕ್ರಮದ ಸಮರ್ಪಕ ಅನುಷ್ಠಾನದ ಹಿತದೃಷ್ಟಿಯಿಂದ ಸದರಿ ಅನುದಾನವನ್ನು, ಶಿವಮೊಗ್ಗ ಜಿಲ್ಲಾ ಪಂಚಾಯತಿಯಿಂದ ಹಿಂಪಡೆದು ಮೇಲಿನ (2)ರಲ್ಲಿ ಓದಲಾದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ರವರಿಗೆ **2014-15ನೇ** ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಇರುವ ಕೇಂದ್ರ ಸಹಾಯಧನ **ರೂ.230.433 ಲಕ್ಷ** ಹಾಗೂ ರಾಜ್ಯ ಸಹಾಯಧನ **ರೂ. 35.33** ಲಕ್ಷ ಅಂದರೆ ಒಟ್ಟಾರೆ **ರೂ. 265.76** ಲಕ್ಷಗಳನ್ನು ಬೆಳಗಾವಿ ಜಿಲ್ಲಾ ಪಂಚಾಯತಿಗೆ RTGS/DD ಮೂಲಕ ವರ್ಗಾಯಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 78 ಜೈಅಯೋ 2015, ಬೆಂಗಳೂರು, ದಿನಾಂಕ 24.08.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ ಶಿವಮೊಗ್ಗ ಜಿಲ್ಲಾ ಪಂಚಾಯತ್‌ನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನದಲ್ಲಿ ಕೇಂದ್ರ ಸಹಾಯಧನ **ರೂ.230.433 ಲಕ್ಷ** ಹಾಗೂ ರಾಜ್ಯ ಸಹಾಯಧನ **ರೂ. 35.33 ಲಕ್ಷ** ಅಂದರೆ ಒಟ್ಟಾರೆ **ರೂ. 265.76** ಲಕ್ಷಗಳನ್ನು ಬೆಳಗಾವಿ ಜಿಲ್ಲಾ ಪಂಚಾಯತಿಗೆ RTGS/DD ಮೂಲಕ ವರ್ಗಾಯಿಸಲು ಆದೇಶಿಸಿದೆ.

ಸದರಿ ವೆಚ್ಚವನ್ನು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆರಡಿ ವೆಚ್ಚ ಭರಿಸಿ, **2014–15ನೇ** ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಮಾರ್ಗಸೂಚಿಯನ್ವಯ ಮಾತ್ರ ಪಾವತಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗ ಪಲ್ಲಟ ಮಾಡತಕ್ಕದಲ್ಲ.

ಸಂಬಂಧಿತ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುದಾನವನ್ನು ವರ್ಗಾಹಿಸಲು ಹಾಗೂ ಪಡೆಯಲು ಸೂಕ್ತ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ಮತ್ತು ಬೆಳಗಾವಿ.
3) ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ಮತ್ತು ಬೆಳಗಾವಿ.

ಪ್ರತಿಯನ್ನು,

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ ರವರ ಮಾಹಿತಿಗಾಗಿ.
2) ಹೆಚ್ಚುವರಿ ಪ್ರತಿ.